# ಕರ್ನಾಟಕ ವಿಧಾನ ಪರಿಷತ್ತು

## ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಕೆ ಅಬ್ದುಲ್ ಜಬ್ಬಾರ್ ಇವರು ನಿಯಮ 72ರಡಿ ನೀಡಿರುವ ಗಮನ ಸೆಳೆಯುವ ಸೂಚನಾ ಪತ್ರಕ್ಕೆ ಉತ್ತರ.

**ಗಮನ ಸೆಳೆಯುವ ಸೂಚನೆ:-**

ರಾಜ್ಯದಲ್ಲಿ ಸುಮಾರು 5 ರಿಂದ 6 ಲಕ್ಷ ಬೀಡಿ ಕಾರ್ಮಿಕರಿದ್ದು, ಅವರಿಗೆ ಸರ್ಕಾರದಿಂದ ಯಾವುದೇ ಸಹಕಾರ ದೊರಕುತ್ತಿಲ್ಲ. ಇವರಿಗೆ ಗುರುತು, ಗುರುತಿನ ಚೀಟಿ, ಕನಿಷ್ಟ ವೇತನ, ಪಿ.ಎಫ್, ಬೋನಸ್, ಸಾಮಾಜಿಕ ಭದ್ರತೆ ಸೇರಿದಂತೆ ಯಾವುದೇ ಆರೋಗ್ಯದ ಸೌಲಭ್ಯವೂ ದೊರಕುತ್ತಿಲ್ಲ. ಸದರಿ ಬೀಡಿ ಕಾರ್ಮಿಕರ ಬಗ್ಗೆ ಕಾರ್ಮಿಕ ಇಲಾಖೆಗಳಂತೂ ಯಾವುದೇ ಗಮನ ಹರಿಸುತ್ತಿಲ್ಲ. ಆದುದರಿಂದ ಸರ್ಕಾರ ಬೀಡಿ ಕಾರ್ಮಿಕರ ರಕ್ಷಣೆಗಾಗಿ ರಾಜ್ಯದಲ್ಲಿರುವಂತಹ ಬೀಡಿ ಕಾರ್ಮಿಕರ ಸಮೀಕ್ಷೆ ನಡೆಸಬೇಕು. ಅವರುಗಳಿಗೆ ಗುರುತಿನ ಚೀಟಿ ನೀಡಬೇಕೆಂದು ಸರ್ಕಾರಕ್ಕೆ ಒತ್ತಾಯಿಸುತ್ತೇನೆ. ಸದರಿ ಬೀಡಿ ಕಾರ್ಮಿಕರಿಗೆ ಕಟ್ಟಡ ಕಾರ್ಮಿಕರ ಮಾದರಿಯಲ್ಲಿ ಬೀಡಿ ಕಾರ್ಮಿಕರ ಕಲ್ಯಾಣ ಮಂಡಳಿಯನ್ನು ರಚನೆ ಮಾಡುವಂತೆ ಕೋರಿರುವ ಬಗ್ಗೆ.

**ಉತ್ತರ:**

ಬೀಡಿ ಕಾರ್ಮಿಕರಿಗೆ ಸಂಬಂಧಿಸಿದಂತೆ ಬೀಡಿ ಮತ್ತು ಸಿಗಾರ್ ಕೆಲಸಗಾರರ (ಔದ್ಯೋಗಿಕ ಷರತ್ತು) ಕಾಯ್ದೆ, 1966 ರಡಿ ಉದ್ಯೋಗ ಷರತ್ತು, ಸುರಕ್ಷತೆ ಹಾಗೂ ಮೂಲ ಸೌಲಭ್ಯಗಳ ಕುರಿತಾಗಿ ಕಾನೂನಾತ್ಮಕವಾಗಿ ಜಾರಿಗೊಳಿಸಲಾಗುತ್ತಿದೆ. ಇದಲ್ಲದೆ ಸದರಿ ಕಾರ್ಮಿಕರಿಗೆ ಅನ್ವಯವಾಗುವ ಕನಿಷ್ಠ ವೇತನ ಕಾಯ್ದೆ, ಉಪಧನ ಪಾವತಿ ಕಾಯ್ದೆ, ವೇತನ ಪಾವತಿ ಕಾಯ್ದೆ, ಬೋನಸ್ ಪಾವತಿ ಕಾಯ್ದೆ, ಮುಂತಾದ ಕಾಯ್ದೆಗಳಡಿ ದೊರೆಯಬಹುದಾದ ಶಾಸನಾತ್ಮಕ ಸೌಲಭ್ಯಗಳನ್ನು ಒದಗಿಸಲು ಕ್ರಮವಹಿಸಲಾಗುತ್ತಿದೆ.

- ಬೀಡಿ ಕಾರ್ಮಿಕರ ಕಲ್ಯಾಣ ಸುಂಕ ನಿಯಮ – 1978ರ ನಿಯಮ 41 ರಡಿ ಬೀಡಿ ಕಾರ್ಮಿಕರಿಗೆ ಮಾಲೀಕರು / ಗುತ್ತಿಗೆದಾರರು ಗುರುತಿನ ಚೀಟಿಗಳನ್ನು ನೀಡಿದ್ದು, ಗುರುತಿನ ಚೀಟಿ ನೀಡದೇ ಇರುವಂತಹ ಕಾರ್ಮಿಕರು ಕಂಡು ಬಂದಲ್ಲಿ ಗುರುತಿನ ಚೀಟಿಯನ್ನು ಕೊಡಿಸಲು ಕ್ರಮವಹಿಸಲಾಗುವುದು.
- "ಬೀಡಿ ತಯಾರಿಕೆ" ಅನುಸೂಚಿತ ಉದ್ದಿಮೆಗೆ, ಕನಿಷ್ಠ ವೇತನ ಕಾಯ್ದೆ 1948 ರನ್ವಯ ಕನಿಷ್ಠ ವೇತನ ದರಗಳನ್ನು ಪರಿಷ್ಕರಿಸಿ, ದಿನಾಂಕ: 14-03-2018 ರಂದು ಅಧಿಸೂಚನೆಯನ್ನು ಹೊರಡಿಸಲಾಗಿತ್ತು. ಸರ್ಕಾರದ ಅಧಿಸೂಚನೆಯನ್ನು ಆಡಳಿತ ವರ್ಗದವರಾದ ಮೆ: ಮಂಗಳೂರು ಗಣೇಶ ಬೀಡಿ ವರ್ಕ್ಸ್, ಮೈಸೂರು ಹಾಗೂ ಮೆ: ಕರ್ನಾಟಕ ಬೀಡಿ ಇಂಡಸ್ಟ್ರೀಸ್ ಅಸೋಸಿಯೇಷನ್, ಮಂಗಳೂರು, ಇವರು ಗೌರವಾನ್ವಿತ ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಂಖ್ಯೆ 8064/2019 ಮತ್ತು 40887/2018 ದಾಖಲಿಸಿರುತ್ತಾರೆ. ಸದರಿ ಪ್ರಕರಣದಲ್ಲಿ ಗೌರವಾನ್ವಿತ ಕರ್ನಾಟಕ ಉಚ್ಚ ನ್ಯಾಯಾಲಯವು ದಿನಾಂಕ: 20-3-2019 ರಂದು "Respondents not to precipitate the matter till the next date of hearing" ಎಂಬುದಾಗಿ ತಡೆಯಾಜ್ಞೆಯನ್ನು ನೀಡಿರುತ್ತದೆ.
- ದಿನಾಂಕ: 14-03-2018 ರಂದು ಹೊರಡಿಸಿದ್ದ ಅಧಿಸೂಚನೆಗೆ ದಿನಾಂಕ: 14-3-2023 ಕ್ಕೆ 5 ವರ್ಷ ಪೂರ್ಣಗೊಂಡ ಹಿನ್ನೆಲೆಯಲ್ಲಿ ನಿಯಮಾನುಸಾರ ವೇತನ ಪರಿಷ್ಕರಣೆಗಾಗಿ ಸರ್ಕಾರವು ಕಾಯ್ದೆಯ ಕಲಂ 5(1)ಎ ರ ಪ್ರಾವಧಾನಗಳನ್ವಯ ಉಪಸಮಿತಿಯನ್ನು ರಚಿಸಿ, ಕನಿಷ್ಠ ವೇತನ ಪರಿಷ್ಕರಣೆ ಮಾಡಲು ಕ್ರಮ ವಹಿಸಲಾಗುತ್ತಿದೆ.

- ಬೀಡಿ ಕಾರ್ಮಿಕರಿಗೆ ಸಂಬಂಧಿಸಿದಂತೆ ಸೌಲಭ್ಯಗಳನ್ನು ಒದಗಿಸುವ ಸಲುವಾಗಿ ಕೇಂದ್ರ ಸರ್ಕಾರವು ಬೀಡಿ ಕಾರ್ಮಿಕರ ಕಲ್ಯಾಣ ಸುಂಕ ಕಾಯ್ದೆ, 1976 ನ್ನು ಜಾರಿಗೊಳಿಸಿದ್ದು, ಸದರಿ ಕಾಯ್ದೆಯಡಿ ಸುಂಕ ಸಂಗ್ರಹಿಸುವ ಅಧಿಕಾರ ವ್ಯಾಪ್ತಿ ಕೇಂದ್ರ ಕಾರ್ಮಿಕ ಇಲಾಖೆಗೆ ಮಾತ್ರ ಇರುತ್ತದೆ. ಅಲ್ಲದೇ ಈ ಕಾಯ್ದೆಯಡಿ ಸಂಗ್ರಹವಾಗುವ ಸುಂಕದ ನಿಧಿಯಿಂದ ಕೇಂದ್ರ ಕಾರ್ಮಿಕ ಕಲ್ಯಾಣ ಮಂಡಳಿಯ ಮೂಲಕ ವಸತಿ, ವೈದ್ಯಕೀಯ ಮತ್ತು ಶೈಕ್ಷಣಿಕ ಸೌಲಭ್ಯಗಳನ್ನು ನೀಡಲಾಗುತ್ತಿದೆ.
- ಬೀಡಿ ಕಾರ್ಮಿಕರಿಗೆ ಸಂಬಂಧಪಟ್ಟಂತೆ ರಾಜ್ಯ ಕಾರ್ಮಿಕ ಇಲಾಖೆಗೆ ಯಾವುದೇ ಸುಂಕ ಸಂಗ್ರಹಿಸುವ ಅಧಿಕಾರ ವ್ಯಾಪ್ತಿ ಇಲ್ಲದಿರುವುದರಿಂದ ಹಾಗೂ ಈಗಾಗಲೇ ಕೇಂದ್ರ ಕಾರ್ಮಿಕ ಕಲ್ಯಾಣ ಮಂಡಳಿ ವತಿಯಿಂದ ಸೌಲಭ್ಯಗಳನ್ನು ಒದಗಿಸುತ್ತಿರುವುದರಿಂದ ರಾಜ್ಯದಲ್ಲಿ ಮತ್ತೊಂದು ಮಂಡಳಿಯನ್ನು ಸ್ಥಾಪಿಸುವ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ.

**ಕಾಇ 328 ಎಲ್ಇಟಿ 2024**

**(ಸಂತೋಷ್ ಎಸ್. ಲಾಡ್)**
**ಕಾರ್ಮಿಕ ಸಚಿವರು**